**ಕರ್ನಾಟಕ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಎಸ್.ಎಲ್.ಭೋಜೇಗೌಡ ಇವರ ನಿಯಮ 72ರಡಿ ಗಮನ ಸೆಳೆಯುವ ಸೂಚನೆಗೆ ಮಾನ್ಯ ಉನ್ನತ ಶಿಕ್ಷಣ ಸಚಿವರ ಉತ್ತರ.**

**ವಿಷಯ:**

ರಾಜ್ಯದ ಗ್ರಾಮೀಣ ಭಾಗದ ವಿದ್ಯಾರ್ಥಿಗಳು ಗುಣಮಟ್ಟದ ವಿದ್ಯಾಭ್ಯಾಸ ಪಡೆದು ಭಾರತದ ಉತ್ತಮ ಪ್ರಜೆಗಳಾಗುವ ಉದ್ದೇಶದಿಂದ ರಾಜ್ಯದ ಹಿಂದುಳಿದ ಜಿಲ್ಲಾ ಮಟ್ಟಗಳಾದ ಚಾಮರಾಜನಗರ, ಹಾವೇರಿ, ಕೊಪ್ಪಳ, ಬಾಗಲಕೋಟೆ, ಮಹಾರಾಣಿ ಕ್ಲಸ್ಟರ್ ಮತ್ತು ಇನ್ನಿತರೆ ವಿಶ್ವವಿದ್ಯಾಲಯಗಳನ್ನು ಮುಚ್ಚುವ ತೀರ್ಮಾನವನ್ನು ಕೈಗೊಂಡಿರುವುದು ಶೋಚನೀಯ ಸಂಗತಿಯಾಗಿದೆ. ಇದರಿಂದ ಈಗಾಗಲೇ ವಿದ್ಯಾಭ್ಯಾಸ ಮಾಡಿದಂತ ಹಾಗೂ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಅನ್ಯಾಯ ಮಾಡಿದಂತಾಗುತ್ತದೆ ಮತ್ತು ರಾಜ್ಯದ ಶೈಕ್ಷಣಿಕ ಹಿರಿಮೆಗೆ ಧಕ್ಕೆ ತಂದಂತಾಗುತ್ತದೆ. ವಿಶ್ವವಿದ್ಯಾಲಯಗಳು ಆದಾಯ ತರುವ ಕ್ಷೇತ್ರವಲ್ಲ, ಶಿಕ್ಷಣ ನೀಡುವುದು ಸರ್ಕಾರದ ಕರ್ತವ್ಯವಾಗಿರುತ್ತದೆ. ಇದರಿಂದ ಶಿಕ್ಷಣವು ಪ್ರತಿ ವಿದ್ಯಾರ್ಥಿಯ ಹಕ್ಕು, ವಿಶ್ವವಿದ್ಯಾಲಯಗಳ ಮುಚ್ಚುವಿಕೆ ಈ ಹಕ್ಕನ್ನು ಕಸಿದಂತಾಗುತ್ತದೆ. ಸಾವಿರಾರು ವಿದ್ಯಾರ್ಥಿಗಳು ಊರಿನಿಂದ ದೂರ ಹೋಗಲು ಸಾಧ್ಯವಿಲ್ಲ. ಅವರ ಉನ್ನತ ವ್ಯಾಸಂಗಕ್ಕೆ ತೊಂದರೆಯಾಗಿ ತಮ್ಮ ಭವಿಷ್ಯ ರೂಪಿಸಿಕೊಳ್ಳಲು ಕಷ್ಟವಾಗುತ್ತದೆ. ವಿಶೇಷವಾಗಿ ಹೆಣ್ಣು ಮಕ್ಕಳ ಶಿಕ್ಷಣ ಕುಂಠಿತವಾಗುತ್ತದೆ. ವಿಶ್ವವಿದ್ಯಾಲಯಗಳನ್ನು ಮುಚ್ಚುವುದರಿಂದ ಬೋಧಕ-ಬೋಧಕೇತರ ಸಿಬ್ಬಂದಿಗಳು, ಸಂಶೋಧನಾರ್ಥಿಗಳು ಮತ್ತು ಈಗಾಗಲೇ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ತೊಂದರೆ ಉಂಟಾಗಿ, ಹೊಸ ಸಂಶೋಧನೆ, ತಂತ್ರಜ್ಞಾನ ಅಭಿವೃದ್ಧಿಗೆ ಅಡ್ಡಿಯಾದಂತಾಗುವುದರಲ್ಲಿ ಯಾವುದೇ ಅನುಮಾನವಿಲ್ಲ. ಇದರ ಬದಲಾಗಿ, ಸದರಿ ವಿಶ್ವವಿದ್ಯಾಲಯಗಳನ್ನು ಮುಚ್ಚದೇ ಅವುಗಳನ್ನು ಹೆಚ್ಚಿನ ಮಟ್ಟದಲ್ಲಿ ಸುಧಾರಿಸಿ, ಅವುಗಳನ್ನು ರಾಷ್ಟ್ರಮಟ್ಟದಲ್ಲಿ ತೆಗೆದುಕೊಂಡುಹೋಗುವುದು ಸರ್ಕಾರದ ಕರ್ತವ್ಯವಾಗಿರುತ್ತದೆ. ಇದಕ್ಕಾಗಿ ಸರ್ಕಾರವು ಹಲವು ಕ್ರಮಗಳನ್ನು ತೆಗೆದುಕೊಳ್ಳಬಹುದಾಗಿರುತ್ತದೆ. ಆದ್ದರಿಂದ ಈ ವಿಶ್ವವಿದ್ಯಾಲಯಗಳನ್ನು ಮುಚ್ಚದೇ, ಇವುಗಳ ಗುಣಮಟ್ಟವನ್ನು ಸುಧಾರಣೆ ಮಾಡಿ, ರಾಜ್ಯದ ಕೀರ್ತಿ ಬೆಳಗಿಸಿ, ವಿದ್ಯಾರ್ಥಿಗಳಿಗೆ ಹಾಗೂ ಬೋಧಕ ಹಾಗೂ ಇತರೆ ಸಿಬ್ಬಂದಿಗಳಿಗೆ ನ್ಯಾಯ ಒದಗಿಸಿಕೊಡುವ ಸಂಬಂಧ ಮಾನ್ಯ ಉನ್ನತ ಶಿಕ್ಷಣ ಸಚಿವರ ಗಮನ ಸೆಳೆಯ ಬಯಸುತ್ತೇನೆ.

**ಉತ್ತರ:**

ರಾಜ್ಯದಲ್ಲಿ ನೂತನವಾಗಿ ಸ್ಥಾಪಿಸಲ್ಪಟ್ಟ ವಿಶ್ವವಿದ್ಯಾಲಯಗಳನ್ನು ಒಳಗೊಂಡಂತೆ ರಾಜ್ಯದಲ್ಲಿರುವ ಎಲ್ಲಾ ವಿಶ್ವವಿದ್ಯಾಲಯಗಳ ಆರ್ಥಿಕ ಪರಿಸ್ಥಿತಿಗಳ ಬಗ್ಗೆ ಪರಾಮರ್ಶಿಸಿ ಸೂಕ್ತ ಶಿಫಾರಸ್ಸುಗಳನ್ನು ಮಾಡಲು ಸನ್ಮಾನ್ಯ ಉಪಮುಖ್ಯಮಂತ್ರಿಯವರ ಅಧ್ಯಕ್ಷತೆಯಲ್ಲಿ ಸಚಿವ ಸಂಪುಟ ಉಪಸಮಿತಿಯನ್ನು ರಚಿಸಿದ್ದು, ಸದರಿ ಸಮಿತಿಯು ಈ ಬಗ್ಗೆ ಸಭೆ ನಡೆಸಿದ್ದು, ವಿಶ್ವವಿದ್ಯಾಲಯಗಳು ಎದುರಿಸುತ್ತಿರುವ ಎಲ್ಲಾ ಸಮಸ್ಯೆಗಳೊಂದಿಗೆ ರಾಜ್ಯದಲ್ಲಿನ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿ ಹಾಗೂ ಅವರ ಮುಂಬರುವ ಭವಿಷ್ಯದ ಹಿತದೃಷ್ಟಿಯನ್ನು ಗಮನದಲ್ಲಿರಿಸಿಕೊಂಡು ವಿದ್ಯಾರ್ಥಿಗಳಿಗೆ ಗುಣಾತ್ಮಕ ಶೈಕ್ಷಣಿಕ ವ್ಯವಸ್ಥೆಯನ್ನು ಕಲ್ಪಿಸುವ ನಿಟ್ಟಿನಲ್ಲಿ ನೂತನವಾಗಿ ಸ್ಥಾಪಿಸಲ್ಪಟ್ಟ ಕೆಲವು ವಿಶ್ವವಿದ್ಯಾಲಯಗಳ ಆರ್ಥಿಕ ಪರಿಸ್ಥಿತಿ, ವಿದ್ಯಾರ್ಥಿಗಳ ಪ್ರವೇಶಾತಿ, ಮೂಲಸೌಲಭ್ಯದ ಕೊರತೆ ಮುಂತಾದ ಪ್ರಮುಖ ಅಂಶಗಳ ಕುರಿತು ಮೊದಲ ಸಭೆಯಲ್ಲಿ ಚರ್ಚಿಸಲಾಗಿದ್ದು, ಸಭೆಯಲ್ಲಿ ಸ್ವೀಕೃತವಾದ ಸಲಹೆಗಳನ್ನು ಪರಾಮರ್ಶಿಸಿ ಕೆಲವು ವಿಶ್ವವಿದ್ಯಾಲಯಗಳ ವಿಲೀನ, ಹೆಚ್ಚಿನ ಅನುದಾನದ ಅಗತ್ಯತೆ ಮತ್ತು ಹಂತ-ಹಂತವಾಗಿ ಖಾಲಿ ಹುದ್ದೆಗಳ ಭರ್ತಿ ಸೇರಿದಂತೆ ವಿಶ್ವವಿದ್ಯಾಲಯಗಳ ಬಲವರ್ಧನೆಗಾಗಿ ಉನ್ನತ ಶಿಕ್ಷಣ ಇಲಾಖೆ ಮತ್ತು ಆರ್ಥಿಕ ಇಲಾಖೆಯು ಒಟ್ಟಾರೆ ಸೇರಿ ವಿಸ್ತೃತವಾದ ವರದಿ/ಪ್ರಸ್ತಾವನೆಯನ್ನು ಸಚಿವ ಸಂಪುಟಕ್ಕೆ ಮಂಡಿಸಿ ಸೂಕ್ತ ತೀರ್ಮಾನ ಕೈಗೊಳ್ಳುವ ಬಗ್ಗೆ ಪರಿಶೀಲಿಸಲಾಗುತ್ತಿದೆ. ರಾಜ್ಯ ಸರ್ಕಾರವು ನೂತನ ವಿಶ್ವವಿದ್ಯಾಲಯಗಳನ್ನು ಮುಚ್ಚುವ ಕುರಿತು ಯಾವುದೇ ತೀರ್ಮಾನವನ್ನು ತೆಗೆದುಕೊಂಡಿರುವುದಿಲ್ಲ.

*******

**ಸಂಖ್ಯೆ: ಇಡಿ 93 ಯುಎನ್ಇ 2025**

(ಡಾ: ಎಂ.ಸಿ. ಸುಧಾಕರ್)
ಉನ್ನತ ಶಿಕ್ಷಣ ಸಚಿವರು